ರಾಯಚೂರು ವಿಶ್ವವಿದ್ಯಾಲಯ RAICHUR UNIVERSITY

ಯರಗೇರಾ–584133, ರಾಯಚೂರು, ಕರ್ನಾಟಕ ರಾಜ್ಯ, ಭಾರತ

Office No. +91 9141030953 ಪರೀಕ್ಷಾ ವಿಭಾಗ E-mail: registrarevrur@gmail.com

ಕ್ರ.ಸಂ.ರಾವಿರಾ/ಪರೀಕ್ಷೆ/ಯು.ಜಿ–II/2022–23/ ದಿನಾಂಕ: 25.03.2023

# ಸುತ್ತೋಲೆ

ವಿಷಯ: 2022–23 ನೇ ಸಾಲಿನ ಬಿ.ಎ, ಬಿ.ಎಸ್ಸಿ, ಬಿ.ಕಾಂ, ಬಿ.ಸಿ.ಎ ಹಾಗೂ ಬಿ.ಬಿ.ಎ ಸ್ನಾತಕ(UG-NEP) ದ್ವಿತೀಯ ಸೆಮಿಸ್ಟರ್‌ನ ಪರೀಕ್ಷಾ ಮೌಲ್ಯಮಾಪನ ಹಾಗೂ ಇನ್ನಿತರ ಪರೀಕ್ಷಾ ಕಾರ್ಯಗಳಿಗೆ ವಿಷಯಾವಾರು ಅಧ್ಯಾಪಕರುಗಳ ಮಾಹಿತಿಯನ್ನು ವಿಶ್ವವಿದ್ಯಾಲಯಕ್ಕೆ ಸಲ್ಲಿಸುವ ಕುರಿತು.

ಉಲ್ಲೇಖ: ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 05.03.2023

*******

ಮೇಲ್ಕಾಣಿಸಿದ ವಿಷಯ ಹಾಗೂ ಮಾನ್ಯ ಕುಲಪತಿಗಳ ಅನುಮೋದನೆಯ ಮೇರೆಗೆ ರಾಯಚೂರು ವಿಶ್ವವಿದ್ಯಾಲಯದ ಅಧೀನದಲ್ಲಿ ಬರುವಂತಹ ರಾಯಚೂರು ಹಾಗೂ ಯಾದಗಿರಿ ಜಿಲ್ಲೆಗಳಲ್ಲಿರುವ ಬಿ.ಎ, ಬಿ.ಎಸ್ಸಿ, ಬಿ.ಕಾಂ, ಬಿ.ಸಿ.ಎ ಹಾಗೂ ಬಿ.ಬಿ.ಎ ಪದವಿ ಮಹಾವಿದ್ಯಾಲಯಗಳ ಪ್ರಾಂಶುಪಾಲರುಗಳಿಗೆ ಈ ಮೂಲಕ ತಿಳಿಸುವುದೇನೆಂದರೆ, ಸ್ನಾತಕ(UG-NEP) ದ್ವಿತೀಯ ಸೆಮಿಸ್ಟರ್ ಪರೀಕ್ಷಾ ಮೌಲ್ಯಮಾಪನ ಹಾಗೂ ಇನ್ನಿತರ ಪರೀಕ್ಷಾ ಕಾರ್ಯಗಳನ್ನು ನಿರ್ವಹಿಸಲು ತಮ್ಮ ಮಹಾವಿದ್ಯಾಲಯದ ಅಧ್ಯಾಪಕರುಗಳ ಸೇವಾ ಮಾಹಿತಿಯನ್ನು ಸೇವಾ ಜೇಷ್ಠತೆಯ ಅಧಾರದ ಮೇಲೆ ಈ ಕೆಳಗೆ ನೀಡಲಾದ Google form link ನಲ್ಲಿ ದಿನಾಂಕ 28.03.2023 ರ ಒಳಗೆ ಸಲ್ಲಿಸಲು ಈ ಮೂಲಕ ಸೂಚಿಸಲಾಗಿದೆ. ಅಧ್ಯಾಪಕರುಗಳ ಸೇವಾ ಪ್ರಮಾಣ ಪತ್ರ ಹಾಗೂ ಸೇವೆಗೆ ಸೇರ್ಪಡೆಯಾದ ಪತ್ರಕ್ಕೆ ಕಾಲೇಜಿನ ಪ್ರಾಂಶುಪಾಲರು ಹಾಗೂ ಮ್ಯಾನೇಜ್‌ಮೆಂಟ್‌ನ ಸಹಿ ಕಡ್ಡಾಯವಾಗಿರುತ್ತದೆ.

**ಸೂಚನೆಗಳು:**

1. ಮಹಾವಿದ್ಯಾಲಯಗಳ ಪ್ರಾಚಾರ್ಯರುಗಳು ಈ ಮಾಹಿತಿಯನ್ನು ಕಳುಹಿಸುವ ಮೊದಲು ಮಾಹಿತಿಯನ್ನು ಪರಿಶೀಲಿಸಿ ಖಚಿತ ಪಡಿಸಿಕೊಂಡು ಮಾಹಿತಿಯನ್ನು ಧೃಢೀಕರಿಸಿ ವಿಶ್ವವಿದ್ಯಾಲಯಕ್ಕೆ ಸಲ್ಲಿಬೇಕಾಗಿ ಹಾಗೂ ಯಾವುದೇ ತಪ್ಪು ಮಾಹಿತಿಯನ್ನು ಒದಗಿಸಿದಲ್ಲಿ ಪ್ರಾಚಾರ್ಯರುಗಳೇ ಅದಕ್ಕೆ ನೇರ ಹೊಣೆಗಾರರಾಗುತ್ತಾರೆ ಎಂಬುದನ್ನು ಗಮನದಲ್ಲಿಟ್ಟುಕೊಳ್ಳಲು ಈ ಮೂಲಕ ಸೂಚಿಸಲಾಗಿದೆ.
2. ಅನುದಾನ ರಹಿತ ಕಾಲೇಜುಗಳ ಅದ್ಯಾಪಕರ ಸೇವಾ ಪ್ರಮಾಣ ಪತ್ರ ಮತ್ತು ಸೇವಾ ಜೇಷ್ಠತೆಯ ಪಟ್ಟಿಯನ್ನು ಕಾಲೇಜು ಮ್ಯಾನೇಜ್‌ಮೆಂಟ್‌ನ ಅಧ್ಯಕ್ಷರು ಅಥವಾ ಕಾರ್ಯದರ್ಶಿಗಳಿಂದ ದೃಢೀಕರಿಸಿ ವಿಶ್ವವಿದ್ಯಾಲಯಕ್ಕೆ ಸಲ್ಲಿಸಬೇಕಾಗಿ ಈ ಮೂಲಕ ಸೂಚಿಸಲಾಗಿದೆ. ಇದರಲ್ಲಿ ಯಾವುದೇ ತಪ್ಪುಗಳಾದಲ್ಲಿ ಅದಕ್ಕೆ ಕಾಲೇಜಿನ ಮ್ಯಾನೇಜ್‌ಮೆಂಟ್‌ನ ಅದ್ಯಕ್ಷರೇ ಹೊನೆಗಾರರಾಗುತ್ತಾರೆ.

Google form link : https://forms.gle/BjNoQrzYmwSzh6vD8

ಕುಲಸಚಿವರು (ಮೌಲ್ಯಮಾಪನ)
ರಾಯಚೂರು ವಿಶ್ವವಿದ್ಯಾಲಯ, ರಾಯಚೂರು

ಗೆ,
ರಾಯಚೂರು ಹಾಗೂ ಯಾದಗಿರಿ ಜಿಲ್ಲೆಗಳ ಎಲ್ಲಾ ಅನುದಾನಿತ ಹಾಗೂ ಅನುದಾನ ರಹಿತ ಮಹಾವಿದ್ಯಾಲಯಗಳ ಪ್ರಾಚಾರ್ಯರುಗಳ ಗಮನಕ್ಕೆ ಮತ್ತು ಸೂಕ್ತ ಕ್ರಮಕ್ಕಾಗಿ.

ಪ್ರತಿಗಳು:

1. ಕುಲಪತಿಗಳ ಆಪ್ತ ಕಾರ್ಯದರ್ಶಿಗಳು/ಕುಲಸಚಿವರು ಅವರ ಆಪ್ತ ಸಹಾಯಕರು, ರಾಯಚೂರು ವಿಶ್ವವಿದ್ಯಾಲಯ, ರಾಯಚೂರು.
2. ಉಪಕುಲಸಚಿವರು, ರಾಯಚೂರು ವಿಶ್ವವಿದ್ಯಾಲಯ, ರಾಯಚೂರು.
3. ಕಚೇರಿ ಪ್ರತಿ.